Date : 02.04.2026

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಂದುವರಿದ ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ ಕೆ.ವಿ.ಸಿ. ವಕೀಲರಿಂದ –**

ನಾನು ಈ ಕೇಸಿನಲ್ಲಿ ಅರ್ಜಿದಾರನಿದ್ದು, ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತವೆ.

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ದಿಃ 02.06.2023 ರ ದಿನಾಂಕದ 1 ಅವಾರ್ಡ ನೋಟೀಸನ್ನು 1 ನೇ ಎದುರುದಾರರು ನನಗೆ ಕಳುಹಿಸಿದ್ದು, ಅದರ ನಕಲು ದೃಢೀಕೃತ ಪ್ರತಿ ಹಾಗೂ ಅರ್ಜಿಯಲ್ಲಿ ಕಾಣಿಸಿದ ಜಮೀನುಗಳ ಬಗ್ಗೆ ಇರುವ 3 ಪಹಣಿ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–1 ರಿಂದ 4 ಎಂದು, ದಿಃ 22.12.2021 ರಂದು 1 ನೇ ಎದುರುದಾರರು ಹೊರಡಿಸಿದ ಸಾಮಾನ್ಯ ಐತೀರ್ಪಿನ ನಕಲು ದೃಢೀಕೃತ ಪ್ರತಿ ಮತ್ತು ಅವಾರ್ಡ ತಃಖ್ತೆಯ ನಕಲು ದೃಢೀಕೃತ ಪ್ರತಿ ಹಾಗೂ ನನ್ನ ಮಾಲೀಕತ್ವದ ಜಮೀನನ್ನು ಎದುರುದಾರರು ಸ್ವಾಧೀನ ಪಡಿಸಿಕೊಂಡ ಬಾಬ್ತು ನನಗೆ ಪರಿಹಾರವನ್ನು ಪಾವತಿಸಿದ ಬಗ್ಗೆ ತೋರಿಸಲು ಇರುವ ಒಂದು ಓಚರ್ ನ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–5 ರಿಂದ 7 ಎಂದು, ಚಿತ್ರದುರ್ಗದ ಭಾರತ ರಾ.ಹೆ.ಗಳ ಪ್ರಾಧಿಕಾರದ ವಿಶೇಷ ಭೂಸ್ವಾಧೀನಾಧಿಕಾರಿ ದಿಃ 28.10.2017 ರಂದು ಹೊರಡಿಸಿದ ಅವಾರ್ಡ ನ ನಕಲು ಪ್ರತಿ ಮತ್ತು ಅದರೊಂದಿಗೆ ಇರುವ ನಮೂನೆ–ಎ ನ ನಕಲು ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–8 ಮತ್ತು 9 ಎಂದು, ಡಿ.ಎಸ್.ಹಳ್ಳಿ ಗ್ರಾಮದ 9 ಆಸ್ತಿಗಳ ಬಗ್ಗೆ ಇರುವ ಪಹಣಿ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–10 ರಿಂದ 18 ಎಂದು ಗುರುತಿಸಲಾಯಿತು.

ಮೇಲಿನ ನನ್ನ ಸಾಕ್ಷಿಯನ್ನು ಪರಿಗಣಿಸಿ ಅರ್ಜಿಯಲ್ಲಿ ಕೋರಿರುವಂತೆ ಎದುರುದಾರರ ವಿರುದ್ಧ ಆದೇಶ ಮಾಡಲು ಕೋರುತ್ತೇನೆ.

**– ಪಾಟೀ ಸವಾಲು – 1 ನೇ ಎದುರುದಾರರ ಡಿ.ಜಿ.ಪಿ. ರವರಿಂದ–**

ಅರ್ಜಿಯಲ್ಲಿ ಕಾಣಿಸಿದ ನನ್ನ ಮಾಲೀಕತ್ವದ ಜಮೀನು ಖುಷ್ಕಿ ಜಮೀನು ಇರುವುದು ಎಂದರೆ ಸರಿಯಲ್ಲ. ಸಾಕ್ಷಿ ಸ್ವತಃ ಹೇಳುವುದೇನೆಂದರೆ ಸದರಿ ಜಮೀನು ಕೊಳವೆ ಬಾವಿ ಆಧಾರಿತ ನೀರಾವರಿ ಜಮೀನು ಇರುವುದೆಂದು ಹೇಳುತ್ತಾರೆ. ಆ ರೀತಿ ಭೂ ಸ್ವಾಧೀನ ಪಡಿಸಿಕೊಂಡ ಜಮೀನು ಕೊಳವೆ ಬಾವಿ ಆಧಾರಿತ ನೀರಾವರಿ ಜಮೀನು ಇರುವುದೆಂದು ತೋರಿಸಲು ನಾನು ನ್ಯಾಯಾಲಯಕ್ಕೆ ದಾಖಲೆ ಹಾಕದ ಬಗ್ಗೆ ನನಗೆ ಗೊತ್ತಿಲ್ಲ. ಅರ್ಜಿಯಲ್ಲಿ ಕಾಣಿಸಿದ ಜಮೀನು ಚಿತ್ರದುರ್ಗ ಪಟ್ಟಣದಿಂದ 10 ಕಿಮೀ ದೂರದಲ್ಲಿ ಇರುವುದು ಎಂದರೆ ಸರಿಯಲ್ಲ. ಸಾಕ್ಷಿ ಸ್ವತಃ ಹೇಳುವುದೇನೆಂದರೆ, ಸದರಿ ಜಮೀನು ಅಂದಾಜು 5 ರಿಂದ 6 ಕಿಮೀ ದೂರದಲ್ಲಿ ಇರುವುದೆಂದು ಹೇಳುತ್ತಾರೆ.

2) 1 ನೇ ಎದುರುದಾರರು ನಮ್ಮ ಗ್ರಾಮದ ಜಮೀನುಗಳನ್ನು ಸ್ವಾಧೀನ ಪಡಿಸಿಕೊಳ್ಳುವ ಮೊದಲು ನಮಗೆ ಮತ್ತು ಇತರೆ ಜಮೀನುಗಳ ಮಾಲೀಕರಿಗೆ ನೋಟೀಸ್ ನೀಡಿ ಸಭೆ ಕರೆಯುತ್ತಿದ್ದು, ಅದಕ್ಕೆ ಹಾಜರಾಗಿರೆಂದು ನಮಗೆ ತಿಳಿಸಿದ್ದರು ಎಂದರೆ ಸರಿ. ಸದರಿ ಸಭೆಯಲ್ಲಿ ನಾನು ಭಾಗವಹಿಸಿದ್ದೆನು. ಸದರಿ ಸಭೆಯಲ್ಲಿ ಇಂತಿಂತಹ ಆಸ್ತಿಗಳಲ್ಲಿ ಭೂ ಸ್ವಾದೀನ ಪಡಿಸಿಕೊಳ್ಳುತ್ತಿದ್ದು, ಅದಕ್ಕೇನಾದರೂ ತಮ್ಮದು ತಕರಾರು ಇದ್ದಲ್ಲಿ ಭೂ ಸ್ವಾಧೀನಾಧಿಕಾರಿಗೆ ತಕರಾರು ಸಲ್ಲಿಸಬಹುದು ಎಂದು ಸಭೆಯಲ್ಲಿದ್ದ ಜನರಿಗೆ ಅಧಿಕಾರಿಗಳು ಹೇಳಿದ್ದರು ಎಂದರೆ ಸರಿ. ಸದರಿ ಸಭೆಯಲ್ಲಿ ಕೂಡಿದ್ದ ಜನರು ಮತ್ತು ನಾನು ನಮ್ಮದು ತಕರಾರು ಇರುವುದೆಂದು ಅಧಿಕಾರಿಗಳಿಗೆ ಬರಹ ರೂಪದಲ್ಲಿ ದಾಖಲೆಯನ್ನೇನೂ ನಾವು ಕೊಟ್ಟಿರುವುದಿಲ್ಲ.

3) ಅರ್ಜಿಯಲ್ಲಿ ಕಾಣಿಸಿದ ನನ್ನ ಮಾಲೀಕತ್ವದ ಜಮೀನನ್ನು ಭೂ ಸ್ವಾಧೀನ ಪಡಿಸಿಕೊಳ್ಳುವಾಗ, 1 ನೇ ಎದುರುದಾರರ ಕಛೇರಿಯ ಸಿಬ್ಬಂದಿ ಹಾಗೂ ಸರ್ವೆ ಅಧಿಕಾರಿಗಳು ಬಂದು ನಮ್ಮ ಸಮಕ್ಷಮದಲ್ಲಿ ಆಸ್ತಿಯನ್ನು ಸರ್ವೆ ಮಾಡಿರುವರು ಎಂದರೆ ಸರಿ. ನಮ್ಮ ಮಾಲೀಕತ್ವದ ಜಮೀನನ್ನು ಸ್ವಾಧೀನ ಪಡಿಸಿಕೊಂಡ ಬಾಬ್ತು ಪರಿಹಾರದ ಹಣವೆಂದು ಕೊಡುತ್ತಿದ್ದು, ಅದನ್ನು ಬಂದು ತೆಗೆದುಕೊಂಡು ಹೋಗಿರೆಂದು ನಮಗೆ 1 ನೇ ಎದುರುದಾರರು ನೋಟೀಸ್ ನೀಡಿದ್ದರು ಎಂದರೆ ಸರಿ. ಅರ್ಜಿಯಲ್ಲಿ ಕಾಣಿಸಿದ ಭೂ ಸ್ವಾಧೀನ ಪಡಿಸಿಕೊಂಡ ಜಮೀನಿನ ಬಾಬ್ತು ಎದುರುದಾರರು ಪರಿಹಾರವೆಂದು ನನಗೆ ರೂ. 8,44,852/- ಹಣ ಪಾವತಿಸಿರುವರು ಎಂದರೆ ಸರಿ. ಸದರಿ ಹಣವನ್ನು ನಾವು ಪಡೆಯುವ ಕಾಲಕ್ಕೆ ಯಾವುದೇ ತಕರಾರು ವ್ಯಕ್ತಪಡಿಸದೇ ಆ ಹಣವನ್ನು ಎದುರುದಾರರಿಂದ ತೆಗೆದುಕೊಂಡಿರುವೆವೆಂದರೆ ಸರಿಯಲ್ಲ.

4) ಮುಖ್ಯವಿಚಾರಣೆಯ ಪುಟ-2 ರಲ್ಲಿ ಕಾಣಿಸಿದಂತೆ ಭೂಸ್ವಾಧೀನ ಪಡಿಸಿಕೊಂಡ ಜಮೀನಿನ ಬೆಲೆ 1 ಗುಂಟೆಗೆ ರೂ. 40,000/- ಇರುವುದೆಂದು ತೋರಿಸಲು ನಾನು ನ್ಯಾಯಾಲಯಕ್ಕೆ ದಾಖಲೆ ಹಾಕಿಲ್ಲವೆಂದರೆ ಸರಿಯಲ್ಲ. ಮುಖ್ಯವಿಚಾರಣೆಯ ಪುಟ-2 ರ ಕಂಡಿಕೆ-2 ರಿಂದ 4 ರಲ್ಲಿ ಕಾಣಿಸಿದ ಅಂಶಗಳಿಗೆ ಸಂಬಂಧಿಸಿದಂತೆ ನಾನು ನ್ಯಾಯಾಲಯಕ್ಕೆ ಸೂಕ್ತ ದಾಖಲೆ ಹಾಜರುಪಡಿಸಿಲ್ಲವೆಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಮೇಲೆ ಹೇಳಿದಂತೆ ಸೂಕ್ತ ದಾಖಲೆಯನ್ನು ಹಾಜರುಪಡಿಸದೇ ಇದ್ದರೂ ಕೂಡ ಹಾಜರುಪಡಿಸಿರುವೆನೆಂದು ಸುಳ್ಳಾಗಿ ಹೇಳುತ್ತಿರುವೆನೆಂದರೆ ಸರಿಯಲ್ಲ.

5) ಎದುರುದಾರರು ಮೇಲೆ ಹೇಳಿದಂತೆ ನಮ್ಮ ಮಾಲೀಕತ್ವದ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡ ಬಾಬ್ತು ನನಗೆ ಕಾನೂನು ಬದ್ಧವಾಗಿ/ಕಾಯ್ದೆ ಯನ್ವಯ ಪರಿಹಾರವನ್ನು ಈಗಾಗಲೇ ಕೊಟ್ಟಿದ್ದು, ಅದು ಸೂಕ್ತ ಇರುವುದು ಎಂದರೆ ಸರಿಯಲ್ಲ. ನಮ್ಮ ಮಾಲೀಕತ್ವದ ಭೂಸ್ವಾಧೀನ ಪಡಿಸಿಕೊಂಡ ಜಮೀನಿಗೆ ಸಂಬಂಧಿಸಿದಂತೆ ಎದುರುದಾರರು ಈಗಾಗಲೇ ನಮಗೆ ಸೂಕ್ತ ಪರಿಹಾರವನ್ನು ನೀಡಿದ್ದು, ಆದರೂ ಕೂಡ ನಾನು ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಅಂಶದ ಪ್ರಮಾಣ ಪತ್ರ ಸಲ್ಲಿಸಿ ನಾನು ಸುಳ್ಳು ಸಾಕ್ಷ್ಯ ಹೇಳುತ್ತಿರುವೆನೆಂದರೆ ಸರಿಯಲ್ಲ.

**- ಪಾಟೀ ಸವಾಲು - 2 ನೇ ಎದುರುದಾರ ಪರ ಶ್ರೀ ವಿ.ಡಿ.ಆರ್. ವಕೀಲರಿಂದ -**

2 ನೇ ಎದುರುದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಕಾರಣ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ)
ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ.